4-2-2023
UDAYAVANI - MANIPAL

## ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ

# ಬಾಂಬೆ ನೆಗೆಟಿವ್ ರಕ್ತದ ಗರ್ಭಿಣಿಯ ಯಶಸ್ವಿ ನಿರ್ವಹಣೆ

ಮಣಿಪಾಲ, ಫೆ. 3: ಅತ್ಯಂತ ಅಪರೂಪದ ರಕ್ತದ ಗುಂಪು ಹೊಂದಿದ್ದ ಗರ್ಭಿಣಿಯೊಬ್ಬರಿಗೆ ಇಲ್ಲಿಯ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಆ್ಯಂಟಿ 'ಡಿ' ಆ್ಯಂಟಿಬಾಡಿ ಇರುವುದನ್ನು ಪರೀಕ್ಷಿಸಿ, ಯಶಸ್ವಿಯಾಗಿ ನಿರ್ವಹಿಸಲಾಗಿದೆ.

ರಕ್ತದ ಗುಂಪು ಒ ನೆಗೆಟಿವ್ ಆಗಿದ್ದ ಹಾಗೂ ಆ್ಯಂಟಿಬಾಡಿ ಇದೆಯೆಂದು ಹೇಳಲಾದ ಗರ್ಭಿಣಿಯನ್ನು ಮುಂದಿನ ನಿರ್ವಹಣೆಗಾಗಿ ಕಸ್ತೂರ್ಬಾ ಆಸ್ಪತ್ರೆಗೆ ಕಳುಹಿಸಲಾಗಿತ್ತು. ಇಲ್ಲಿನ ರಕ್ತ ಕೇಂದ್ರದಲ್ಲಿ ಪರೀಕ್ಷೆ ಮಾಡಿದಾಗ ಮಹಿಳೆಗೆ ಅತ್ಯಂತ ಅಪರೂಪದ 'ಬಾಂಬೆ ನೆಗೆಟಿವ್' ರಕ್ತದ ಗುಂಪು ಇರುವುದು ಪತ್ತೆಯಾಯಿತು.

ಈ ಬಗ್ಗೆ ಮಾಹಿತಿ ನೀಡಿದ ಆಸ್ಪತ್ರೆಯ ರಕ್ತ ಕೇಂದ್ರದ ಮುಖ್ಯಸ್ಥೆ ಡಾ| ಶಮೀ ಶಾಸ್ತ್ರಿ ದೇಶದಲ್ಲಿ ಈ ಅಪರೂಪದ ರಕ್ತದ ಗುಂಪಿನ ಕೆಲವೇ ದಾನಿಗಳಿರುವುದರಿಂದ ರಕ್ತ ವರ್ಗಾವಣೆ ತಜ್ಞರು ಮತ್ತು ಪ್ರಸೂತಿ ತಜ್ಞರಿಗೆ ಇದರ ನಿರ್ವಹಣೆ ಸವಾಲಾಗಿತ್ತು. ಗರ್ಭಿಣಿಯ ಹಿಮೋಗ್ಲೋಬಿನ್ ಪ್ರಮಾಣ ಹೆಚ್ಚಿಸಿ ಸ್ವಯಂ ರಕ್ತ ಸಂಗ್ರಹಿಸಲಾಯಿತು ಎಂದರು. .

ಎರಿಥ್ರೋಪೊಯೆಟಿನ್ ಚುಚ್ಚು ಮದ್ದು ಮತ್ತು ಕಬ್ಬಿಣಾಂಶದ ಚುಚ್ಚು ಮದ್ದುಗಳನ್ನು ಪ್ರಸವಪೂರ್ವ ಹಿಮೋಗ್ಲೋಬಿನ್ ಸುಧಾರಿಸಲು ಬಳಸಲಾಯಿತು. ಭ್ರೂಣಕ್ಕೆ ರಕ್ತ ಪೂರೈಕೆ ಕಡಿಮೆ ಮತ್ತು ಭ್ರೂಣದ ಬೆಳವಣಿಗೆಯ ನಿರ್ಬಂಧ (ಎಫ್‌ಜಿಆರ್) ಕಾರಣದಿಂದ ತಾಯಿಯ ಆರೈಕೆಯು ಮತ್ತಷ್ಟು ಜಟಿಲವಾಗಿತ್ತು. ತಾಯಿಯಲ್ಲಿದ್ದ ಪ್ರತಿಕಾಯಗಳ ಕಾರಣದಿಂದ ಭ್ರೂಣವು ರಕ್ತಹೀನತೆಯ ಅಪಾಯದಲ್ಲಿತ್ತು. ಎಂದು ಹೇಳಿದರು.

ಫೀಟಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ| ಅಖಿಲಾ ವಾಸುದೇವ ಅವರು ಭ್ರೂಣದ ಮೇಲೆ ನಿರಂತರ ನಿಗಾ ಇರಿಸಿ ಪ್ರಸವಪೂರ್ವ ಆರೈಕೆ ನಿರ್ವಹಿಸಿ, ರಕ್ತರಹಿತ ಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಿದರು.

ಆಸ್ಪತ್ರೆಯ ಸಿಇಒ ಡಾ| ಆನಂದ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ಅವರು ವೈದ್ಯರ ತಂಡವನ್ನು ಅಭಿನಂದಿಸಿದರು.

ವಿಜಯವಾಣಿ
VIJAYAVANI » MANGALURU
ಶನಿವಾರ 4 ಫೆಬ್ರವರಿ 2023
4 FEBRUARY 2023

## ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ ವೈದ್ಯರ ಸಾಧನೆ

# ಬಾಂಬೆ ಫಿನೋಟೈಪ್ ಹೊಂದಿದ್ದಾಕೆಗೆ ಚಿಕಿತ್ಸೆ

**ಉಡುಪಿ:** ಅತ್ಯಂತ ಅಪರೂಪದ ಬಾಂಬೆ ನೆಗೆಟಿವ್ ರಕ್ತದ ಗುಂಪು ಹೊಂದಿದ್ದ ಗರ್ಭಿಣಿಗೆ ಪ್ರಸವಪೂರ್ವ ಚಿಕಿತ್ಸೆ ನೀಡಿ ರಕ್ತ ರಹಿತ ಶಸ್ತ್ರಚಿಕಿತ್ಸೆ ಮೂಲಕ ತಾಯಿ ಹಾಗೂ ಮಗುವನ್ನು ರಕ್ಷಿಸುವಲ್ಲಿ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆ ವೈದ್ಯರ ತಂಡ ಯಶಸ್ವಿಯಾಗಿದೆ.

ಮಣಿಪಾಲ ಕೆಎಂಸಿಗೆ ತಪಾಸಣೆಗೆ ಬಂದಿದ್ದ ಗರ್ಭಿಣಿಯಲ್ಲಿ ಅಪರೂಪದ ಬಾಂಬೆ ನೆಗೆಟಿವ್ ರಕ್ತದ ಗುಂಪು ಇರುವುದು ಕಂಡುಬಂದಿತ್ತು. ಇಂಥ ಸಂದರ್ಭದಲ್ಲಿ ಆ್ಯಂಟಿ ಡಿ ಆ್ಯಂಟಿ ಬಾಡಿ ಇರುವಿಕೆಯ ಪರೀಕ್ಷೆ ತುಂಬಾ ಕಷ್ಟಕರ. ರಕ್ತದ ಉನ್ನತಮಟ್ಟದ ಇಮ್ಯುನೋಹೆಮಟಾಲಜಿ ಪರೀಕ್ಷೆ ಮೂಲಕ ಆ್ಯಂಟಿ ಡಿ ಆ್ಯಂಟಿಬಾಡಿ ಇಲ್ಲವೆಂಬುದನ್ನು ವೈದ್ಯರು ಸಾಬೀತು ಪಡಿಸಿದರು.

ಇಡೀ ದೇಶದಲ್ಲಿ ಈ ಅಪರೂಪದ ರಕ್ತದ ಗುಂಪಿನ ಕೆಲವೇ ದಾನಿಗಳಿರುವುದರಿಂದ ರಕ್ತ ವರ್ಗಾವಣೆ ತಜ್ಞರು ಮತ್ತು ಪ್ರಸೂತಿ ತಜ್ಞರಿಗೆ ಇದರ ನಿರ್ವಹಣೆ ಒಂದು ಸವಾಲಾಗಿತ್ತು. ಆಕೆಯ ಹಿಮೋಗ್ಲೋಬಿನ್ ಮಟ್ಟ ಹೆಚ್ಚಿಸುವ ಮೂಲಕ ಸ್ವಯಂ ರಕ್ತ ಸಂಗ್ರಹಣೆ ಮಾಡಲಾಯಿತು. ಎರಿಥ್ರೋಪೊಯಿಟಿನ್ ಚುಚ್ಚುಮದ್ದು ಮತ್ತು ಐರನ್ ಚುಚ್ಚುಮದ್ದುಗಳನ್ನು ಪ್ರಸವಪೂರ್ವ ಹಿಮೋಗ್ಲೋಬಿನ್ ಮಟ್ಟವನ್ನು ಸುಧಾರಿಸಲು ಬಳಸಲಾಯಿತು. ಭ್ರೂಣಕ್ಕೆ ರಕ್ತ ಪೂರೈಕೆ ಕಡಿಮೆ ಇದ್ದುದರಿಂದ ಮತ್ತು ಭ್ರೂಣದ ಬೆಳವಣಿಗೆಯ ನಿರ್ಬಂಧ ಕಾರಣ ತಾಯಿಯ ಆರೈಕೆ ಮತ್ತಷ್ಟು ಜಟಿಲವಾಗಿತ್ತು. ತಾಯಿಯ ಪ್ರತಿಕಾಯಗಳ ಕಾರಣದಿಂದಾಗಿ ಭ್ರೂಣವು ರಕ್ತಹೀನತೆಯ ಅಪಾಯದಲ್ಲಿತ್ತು, ಇದಕ್ಕಾಗಿ ಹೆಚ್ಚುವರಿ ಮೇಲ್ವಿಚಾರಣೆ ಮಾಡಲಾಯಿತು ಎಂದು ಕಸ್ತೂರ್ಬಾ ಆಸ್ಪತ್ರೆ ರಕ್ತ ಕೇಂದ್ರದ ಮುಖ್ಯಸ್ಥೆ ಡಾ.ಶಮೀ ಶಾಸ್ತ್ರಿ ತಿಳಿಸಿದ್ದಾರೆ.

ಫೀಟಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ.ಅಖಿಲಾ ವಾಸುದೇವ ಅವರು ಭ್ರೂಣದ ಮೇಲೆ ನಿರಂತರ ನಿಗಾವಹಿಸಿ ಪ್ರಸವಪೂರ್ವ ಆರೈಕೆ ನಿರ್ವಹಿಸಿ ರಕ್ತರಹಿತ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಿರ್ವಹಿಸಿದರು.

ಅಪರೂಪದ ರಕ್ತದ ಗುಂಪನ್ನು ಸಮಯೋಚಿತವಾಗಿ ಪತ್ತೆಹಚ್ಚಿ ಯಶಸ್ವಿಯಾಗಿ ನಿರ್ವಹಿಸಿದ ವೈದ್ಯರ ತಂಡವನ್ನು ಕಸ್ತೂರ್ಬಾ ಆಸ್ಪತ್ರೆ ಮುಖ್ಯ ನಿರ್ವಹಣಾಧಿಕಾರಿ ಡಾ.ಆನಂದ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಶ್ಲಾಘಿಸಿದರು.

ಪ್ರಜಾವಾಣಿ
ಶನಿವಾರ • ಫೆಬ್ರುವರಿ 4, 2023

# ಬಾಂಬೆ ರಕ್ತಗುಂಪಿನ ಮಹಿಳೆಗೆ ಚಿಕಿತ್ಸೆ

## ಮಣಿಪಾಲದ ಕಸ್ತೂರಬಾ ಆಸ್ಪತ್ರೆ ವೈದ್ಯರ ತಂಡದ ಸಾಧನೆ

ಪ್ರಜಾವಾಣಿ ವಾರ್ತೆ

ಉಡುಪಿ: ಮಣಿಪಾಲದ ಕಸ್ತೂರಬಾ ಆಸ್ಪತ್ರೆಯಲ್ಲಿ ಅಪರೂಪದ ಬಾಂಬೆ ಫಿನೋಟೈಪ್ ರಕ್ತದ ಗುಂಪು ಹೊಂದಿರುವ ಗರ್ಭಿಣಿಗೆ ಯಶಸ್ವಿಯಾಗಿ ಚಿಕಿತ್ಸೆ ನೀಡಲಾಗಿದ್ದು, ತಾಯಿ ಹಾಗೂ ಮಗು ಆರೋಗ್ಯವಾಗಿದ್ದಾರೆ.

‘ಒ’ ನೆಗೆಟಿವ್ ರಕ್ತದ ಗುಂಪು ಹಾಗೂ ಆ್ಯಂಟಿ ಬಾಡಿ ಇರುವ ಕಾರಣ ನೀಡಿ ಈಚೆಗೆ ಗರ್ಭಿಣಿಯೊಬ್ಬರು ಮಣಿಪಾಲದ ಕೆಎಂಸಿ ಆಸ್ಪತ್ರೆಗೆ ದಾಖಲಾಗಿದ್ದರು. ಕೂಡಲೇ ಆಸ್ಪತ್ರೆಯ ರಕ್ತ ಕೇಂದ್ರದಲ್ಲಿ ಮಹಿಳೆಯ ರಕ್ತವನ್ನು ಪರೀಕ್ಷೆಗೊಳಪಡಿಸಿದಾಗ ದೇಶದಲ್ಲಿಯೇ ಅತಿ ಅಪರೂಪದ ‘ಬಾಂಬೆ ನೆಗೆಟಿವ್’ ರಕ್ತದ ಗುಂಪು ಇರುವುದು ದೃಢಪಟ್ಟಿತು.

ಇಂತಹ ಸಂದರ್ಭದಲ್ಲಿ ಮಹಿಳೆಯ ದೇಹದಲ್ಲಿ ಆ್ಯಂಟಿ ‘ಡಿ’ ಆ್ಯಂಟಿ ಬಾಡಿ ಇರುವಿಕೆ ಪತ್ತೆ ಹಚ್ಚುವುದು ಬಹಳ ಕಷ್ಟಕರವಾಗಿತ್ತು.

ಸವಾಲನ್ನು ಸ್ವೀಕರಿಸಿದ ವೈದ್ಯರು ಮಹಿಳೆಯ ರಕ್ತವನ್ನು ಉನ್ನತ ಮಟ್ಟದ ಇಮ್ಯುನೊ ಹೆಮಟಾಲೋಜಿ ಪರೀಕ್ಷೆಗೊಳಪಡಿಸಿದರು. ಈ ಸಂದರ್ಭ ಆ್ಯಂಟಿ ‘ಡಿ’ ಆ್ಯಂಟಿಬಾಡಿ ಇಲ್ಲದಿರುವುದು ದೃಢಪಟ್ಟಿತು ಎಂದು ಆಸ್ಪತ್ರೆಯ ರಕ್ತ ಕೇಂದ್ರದ ಮುಖ್ಯಸ್ಥೆ ಡಾ.ಶಮಿ ಶಾಸ್ತ್ರಿ ಚಿಕಿತ್ಸೆಯ ವಿವರ ನೀಡಿದರು.

‘ದೇಶದಲ್ಲಿಯೇ ಬಾಂಬೆ ನೆಗೆಟಿವ್ ಅಪರೂಪದ ರಕ್ತದ ಗುಂಪಾಗಿದ್ದು ಈ ರಕ್ತದ ಗುಂಪು ಹೊಂದಿದರಿಗೆ ತುರ್ತು ಸಂದರ್ಭಗಳಲ್ಲಿ ರಕ್ತ ಹೊಂದಿಸುವುದು ದೊಡ್ಡ ಸವಾಲು. ದೇಶದಲ್ಲಿ ಬಾಂಬೆ ನೆಗೆಟಿವ್ ರಕ್ತದ ಗುಂಪು ಹೊಂದಿರುವ ಕೆಲವೇ ದಾನಿಗಳು ಮಾತ್ರ ಇರುವುದು ಇದಕ್ಕೆ ಕಾರಣ.

ಗರ್ಭಿಣಿ ಹೆರಿಗೆಗಾಗಿ ಆಸ್ಪತ್ರೆಗೆ ದಾಖಲಾದಾಗ ರಕ್ತ ಹೊಂದಿಸುವುದು, ನಿರ್ವಹಣೆ ಮಾಡುವುದು ಸವಾಲಾಗಿ ಪರಿಣಮಿಸಿತ್ತು. ಈ ಸಂದರ್ಭ ಮಹಿಳೆಯ ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸುವ ಮೂಲಕ ಸ್ವಯಂ ರಕ್ತ ಸಂಗ್ರಹಣೆ ಪ್ರಕ್ರಿಯೆಗೆ ವೈದ್ಯರು ಆದ್ಯತೆ ನೀಡಿದರು ಎಂದು ಶಮಿ ಶಾಸ್ತ್ರಿ ತಿಳಿಸಿದರು.

### ಚಿಕಿತ್ಸಾ ಕ್ರಮ ಹೇಗೆ?

ಗರ್ಭಿಣಿಗೆ ಎರಿಥ್ರೋಪೊಯೆಟಿನ್ ಚುಚ್ಚುಮದ್ದು ಹಾಗೂ ಕಬ್ಬಿಣದ ಅಂಶಗಳಿರುವ ಚುಚ್ಚುಮದ್ದುಗಳನ್ನು ಪ್ರಸವ ಪೂರ್ವವಾಗಿ ನೀಡಲಾಯಿತು. ರಕ್ತದಲ್ಲಿನ ಹಿಮೋಗ್ಲೋಬಿನ್ ಮಟ್ಟವನ್ನು ಸುಧಾರಿಸಲು ಈ ಪ್ರಕ್ರಿಯೆ ಬಹಳ ಮುಖ್ಯವಾದುದು. ಭ್ರೂಣಕ್ಕೆ ರಕ್ತದ ಪೂರೈಕೆ ಕಡಿಮೆ ಇದ್ದ ಕಾರಣ ತಾಯಿಯ ಆರೈಕೆ ಮಾಡುವುದು ಜಟಿಲವಾಗಿತ್ತು. ಭ್ರೂಣ ಕೂಡ ರಕ್ತಹೀನತೆಯಿಂದ ಬಳಲುವ ಅಪಾಯ ಎದುರಾಗಿತ್ತು. ಇದನ್ನು ಮನಗಂಡು ಫೀಟಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ.ಅಖಿಲಾ ವಾಸುದೇವ್ ಭ್ರೂಣದ ಮೇಲೆ ನಿರಂತರ ನಿಗಾ ವಹಿಸಿ ಪ್ರಸವಪೂರ್ವ ಆರೈಕೆ ಮಾಡಿ ಯಶಸ್ವಿಯಾಗಿ ರಕ್ತ ರಹಿತ ಶಸ್ತ್ರ ಚಿಕಿತ್ಸೆ ಮಾಡಿದ್ದಾರೆ. ಸದ್ಯ ತಾಯಿ ಮಗು ಆರೋಗ್ಯವಾಗಿದ್ದಾರೆ ಎಂದು ತಿಳಿಸಿದರು.



# Manipal: Kasturba Hospital successfully manages Bombay Negative blood group pregnancy case



**Manipal, Feb 03, 2023:** Kasturba Hospital in Manipal handled a unique medical case with great success.

The patient, who was referred for management of an O-negative pregnancy with a positive indirect Coombs test, was diagnosed with the rare Bombay Negative blood group after testing at Kasturba Hospital Blood Center.

The team of doctors, led by Dr. Shamee Shastry, professor and head of the Blood Center, and Dr. Akhila Vasudeva, professor and head of foetal medicine, faced a challenging task as there are only a limited number of donors with this blood group available in the country.

To manage the case, the doctors increased the patient's haemoglobin level using hematinics, erythropoietin injections, and iron injections. Obstetric care was further complicated by Fetal Growth Restriction and poor blood supply to the fetus. Fetus was also at risk of anemia due to maternal antibodies, for which additional intense monitoring was done.

Despite these difficulties, Dr. Akhila Vasudeva was able to get the baby delivered through a bloodless surgery after intense monitoring.

The success of this case highlights the importance of antenatal antibody screening and blood grouping during pregnancy. This case highlights that timely identification of a rare blood phenotype leads to better patient management.

Kasturba Hospital's chief operating officer, Dr Anand Venugopal , and medical superintendent, Dr Avinash Shetty praised the medical team for their timely diagnosis and effective management of this rare case.

# ಕೆ.ಎಂ.ಸಿ ಮಣಿಪಾಲ: ಅಪರೂಪದ ರಕ್ತದ ಗುಂಪಿನ ಬಾಂಬೆ ಫಿನೋಟೈಪ್ ಮಹಿಳೆಯ ಯಶಸ್ವಿ ನಿರ್ವಹಣೆ

By **Udupi Bulletin News Desk** - February 3, 2023 0



**ಮಣಿಪಾಲ, ಫೆ. 3:** ರಕ್ತದ ಗುಂಪು ಓ ನೆಗೆಟಿವ್ ಆಗಿದ್ದು ಹಾಗೂ ಆಂಟಿಬಾಡಿ ಇದೆಯೆಂದು ಮುಂದಿನ ನಿರ್ವಹಣೆಗಾಗಿ ಗರ್ಭಿಣಿ ಮಹಿಳೆಯನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ಕಳುಹಿಸಲಾಗಿತ್ತು. ಕಸ್ತೂರ್ಬಾ ಆಸ್ಪತ್ರೆ ರಕ್ತ ಕೇಂದ್ರದಲ್ಲಿ ಪರೀಕ್ಷೆ ಮಾಡಿದಾಗ ಮಹಿಳೆಗೆ ಅತ್ಯಂತ ಅಪರೂಪದ ಬಾಂಬೆ ನೆಗೆಟಿವ್ ರಕ್ತದ ಗುಂಪು ಇರುವುದು ಕಂಡುಬಂದಿತು. ಇಂತಹ ಸಂದರ್ಭದಲ್ಲಿ ಆಂಟಿ 'ಡಿ' ಆಂಟಿಬಾಡಿ ಇರುವಿಕೆಯನ್ನು ಪರೀಕ್ಷೆ ಮಾಡಲು ತುಂಬಾ ಕಷ್ಟ. ರಕ್ತದ ಉನ್ನತ ಮಟ್ಟದ ಇಮ್ಯುನೊ ಹೆಮಟಾಲೋಜಿ ಪರೀಕ್ಷೆಯ ಮೂಲಕ ಆಂಟಿ 'ಡಿ' ಆಂಟಿಬಾಡಿ ಇಲ್ಲವೆಂದು ಸಾಬೀತುಪಡಿಸಲಾಯಿತು.

ಕಸ್ತೂರ್ಬಾ ಆಸ್ಪತ್ರೆಯ ರಕ್ತ ಕೇಂದ್ರದ ಮುಖ್ಯಸ್ಥೆ ಡಾ.ಶಮೀ ಶಾಸ್ತ್ರಿ, ಮಾತನಾಡಿ, ಇಡೀ ದೇಶದಲ್ಲಿ ಈ ಅಪರೂಪದ ರಕ್ತದ ಗುಂಪಿನ ಕೆಲವೇ ದಾನಿಗಳಿರುವುದರಿಂದ ರಕ್ತ ವರ್ಗಾವಣೆ ತಜ್ಞರು ಮತ್ತು ಪ್ರಸೂತಿ ತಜ್ಞರಿಗೆ ಇದರ ನಿರ್ವಹಣೆ ಒಂದು ಸವಾಲಾಗಿತ್ತು. ಆಕೆಯ ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸುವ ಮೂಲಕ ಸ್ವಯಂ ರಕ್ತ ಸಂಗ್ರಹಣೆ ಮಾಡಲಾಯಿತು' ಎಂದರು. ಎರಿಥ್ರೋಪೊಯೆಟಿನ್ ಚುಚ್ಚುಮದ್ದು ಮತ್ತು ಐರನ್ ಚುಚ್ಚುಮದ್ದುಗಳನ್ನು ಪ್ರಸವಪೂರ್ವ ಹಿಮೋಗ್ಲೋಬಿನ್ ಅನ್ನು ಸುಧಾರಿಸಲು ಬಳಸಲಾಯಿತು.

ಭ್ರೂಣಕ್ಕೆ ರಕ್ತ ಪೂರೈಕೆ ಕಡಿಮೆ ಇದ್ದುದರಿಂದ ಮತ್ತು ಭ್ರೂಣದ ಬೆಳವಣಿಗೆಯ ನಿರ್ಬಂಧ ಕಾರಣದಿಂದ ತಾಯಿಯ ಆರೈಕೆಯು ಮತ್ತಷ್ಟು ಜಟಿಲವಾಗಿತ್ತು. ತಾಯಿಯ ಪ್ರತಿಕಾಯಗಳ ಕಾರಣದಿಂದಾಗಿ ಭ್ರೂಣವು ರಕ್ತಹೀನತೆಯ ಅಪಾಯದಲ್ಲಿತ್ತು, ಇದಕ್ಕಾಗಿ ಹೆಚ್ಚುವರಿ ತೀವ್ರ ಮೇಲ್ವಿಚಾರಣೆಯನ್ನು ಮಾಡಲಾಯಿತು.

ಫೀಟಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ. ಅಖಿಲಾ ವಾಸುದೇವ ಅವರು ಭ್ರೂಣದ ಮೇಲೆ ನಿರಂತರ ನಿಗಾವಹಿಸಿ ಪ್ರಸವಪೂರ್ವ ಆರೈಕೆ ನಿರ್ವಹಿಸಿ ರಕ್ತರಹಿತ ಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಿದರು. ಉತ್ತಮ ರೋಗಿಯ ನಿರ್ವಹಣೆಗಾಗಿ ಗರ್ಭಾವಸ್ಥೆಯಲ್ಲಿ ಪ್ರಸವಪೂರ್ವ ಪ್ರತಿಕಾಯ ಸ್ಕ್ರೀನಿಂಗ್ ಮತ್ತು ರಕ್ತದ ಗುಂಪಿನ ಪರೀಕ್ಷೆ ಮಾಡುವುದರ ಪ್ರಾಮುಖ್ಯತೆಯನ್ನು ಅವರು ಒತ್ತಿ ಹೇಳಿದರು.

ಕಸ್ತೂರ್ಬಾ ಆಸ್ಪತ್ರೆಯ ಮುಖ್ಯ ನಿರ್ವಹಣಾಧಿಕಾರಿ ಡಾ. ಆನಂದ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ ಅವರು ಅಪರೂಪದ ರಕ್ತದ ಗುಂಪನ್ನು ಸಮಯೋಚಿತವಾಗಿ ಪತ್ತೆ ಹಚ್ಚಿ ಯಶಸ್ವಿಯಾಗಿ ನಿರ್ವಹಿಸಿದುದಕ್ಕೆ ವೈದ್ಯರ ತಂಡವನ್ನು ಶ್ಲಾಘಿಸಿದರು.

KARAVALI XPRESS.COM
Saturday, February 25, 2023

# ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಅಪರೂಪದ ರಕ್ತದ ಗುಂಪಿನ ಬಾಂಬೆ ಫಿನೋಟೈಪ್ ಹೊಂದಿರುವ ಮಹಿಳೆಯ ಯಶಸ್ವಿ ನಿರ್ವಹಣೆ

By Janardhan Kodavoor/Team karavalixpress, February 5, 2023



ಮಣಿಪಾಲ: ರಕ್ತದ ಗುಂಪು 0 ನೆಗೆಟಿವ್ ಆಗಿದ್ದು ಹಾಗೂ ಆಂಟಿಬಾಡಿ ಇದೆಯೆಂದು ಮುಂದಿನ ನಿರ್ವಹಣೆಗಾಗಿ ಗರ್ಭಿಣಿ ಮಹಿಳೆಯನ್ನು ಕಸ್ತೂರ್ಬಾ ಆಸ್ಪತ್ರೆ ಮಣಿಪಾಲಕ್ಕೆ ಕಳುಹಿಸಲಾಗಿತ್ತು. ಕಸ್ತೂರ್ಬಾ ಆಸ್ಪತ್ರೆ ರಕ್ತ ಕೇಂದ್ರದಲ್ಲಿ ಪರೀಕ್ಷೆ ಮಾಡಿದಾಗ ಮಹಿಳೆಗೆ ಅತ್ಯಂತ ಅಪರೂಪದ ಬಾಂಬೆ ನೆಗೆಟಿವ್ ರಕ್ತದ ಗುಂಪು ಇರುವುದು ಕಂಡುಬಂದಿತು. ಇಂತಹ ಸಂದರ್ಭದಲ್ಲಿ ಆಂಟಿ 'ಡಿ' ಆಂಟಿಬಾಡಿ ಇರುವಿಕೆಯನ್ನುಪರೀಕ್ಷೆ ಮಾಡಲು ತುಂಬಾ ಕಷ್ಟ. ರಕ್ತದ ಉನ್ನತ ಮಟ್ಟದ ಇಮ್ಯುನೊಹೆಮಟಾಲೋಜಿ ಪರೀಕ್ಷೆಯ ಮೂಲಕ ಆಂಟಿ 'ಡಿ' ಆಂಟಿಬಾಡಿ ಇಲ್ಲವೆಂದು ಸಾಬೀತುಪಡಿಸಲಾಯಿತು.

ಕಸ್ತೂರ್ಬಾ ಆಸ್ಪತ್ರೆಯ ರಕ್ತ ಕೇಂದ್ರದ ಮುಖ್ಯಸ್ಥೆ ಡಾ.ಶಮೀ ಶಾಸ್ತ್ರಿ, ಮಾತನಾಡಿ, 'ಇಡೀ ದೇಶದಲ್ಲಿ ಈ ಅಪರೂಪದ ರಕ್ತದ ಗುಂಪಿನ ಕೆಲವೇ ದಾನಿಗಳಿರುವುದರಿಂದ ರಕ್ತ ವರ್ಗಾವಣೆ ತಜ್ಞರು ಮತ್ತು ಪ್ರಸೂತಿ ತಜ್ಞರಿಗೆ ಇದರ ನಿರ್ವಹಣೆ ಒಂದು ಸವಾಲಾಗಿತ್ತು. ಆಕೆಯ ಹಿಮೋಗ್ಲೋಬಿನ್ ಮಟ್ಟವನ್ನು ಹೆಚ್ಚಿಸುವ ಮೂಲಕ ಸ್ವಯಂ ರಕ್ತ ಸಂಗ್ರಹಣೆ ಮಾಡಲಾಯಿತು' ಎಂದರು. ಎರಿಥ್ರೋಪೊಯೆಟಿನ್ ಚುಚ್ಚುಮದ್ದು ಮತ್ತು ಐರನ್ ಚುಚ್ಚುಮದ್ದುಗಳನ್ನು ಪ್ರಸವಪೂರ್ವ ಹಿಮೋಗ್ಲೋಬಿನ್ ಅನ್ನು ಸುಧಾರಿಸಲು ಬಳಸಲಾಯಿತು. ಭ್ರೂಣಕ್ಕೆ ರಕ್ತ ಪೂರೈಕೆ ಕಡಿಮೆ ಇದ್ದುದರಿಂದ ಮತ್ತು ಭ್ರೂಣದ ಬೆಳವಣಿಗೆಯ ನಿರ್ಬಂಧ(FGR) ಕಾರಣದಿಂದ ತಾಯಿಯ ಆರೈಕೆಯು ಮತ್ತಷ್ಟು ಜಟಿಲವಾಗಿತ್ತು. ತಾಯಿಯ ಪ್ರತಿಕಾಯಗಳ ಕಾರಣದಿಂದಾಗಿ ಭ್ರೂಣವು ರಕ್ತಹೀನತೆಯ ಅಪಾಯದಲ್ಲಿತ್ತು , ಇದಕ್ಕಾಗಿ ಹೆಚ್ಚುವರಿ ತೀವ್ರ ಮೇಲ್ವಿಚಾರಣೆಯನ್ನು ಮಾಡಲಾಯಿತು.

ಫೀಟಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥೆ ಡಾ.ಅಖಿಲಾ ವಾಸುದೇವ ಅವರು ಭ್ರೂಣದ ಮೇಲೆ ನಿರಂತರ ನಿಗಾವಹಿಸಿ ಪ್ರಸವಪೂರ್ವ ಆರೈಕೆ ನಿರ್ವಹಿಸಿ ರಕ್ತರಹಿತ ಶಸ್ತ್ರ ಚಿಕಿತ್ಸೆಯನ್ನು ಯಶಸ್ವಿಯಾಗಿ ಮಾಡಿದರು. ಉತ್ತಮ ರೋಗಿಯ ನಿರ್ವಹಣೆಗಾಗಿ ಗರ್ಭಾವಸ್ಥೆಯಲ್ಲಿ ಪ್ರಸವಪೂರ್ವ ಪ್ರತಿಕಾಯ ಸ್ಕ್ರೀನಿಂಗ್ ಮತ್ತು ರಕ್ತದ ಗುಂಪಿನ ಪರೀಕ್ಷೆ ಮಾಡುವುದರ ಪ್ರಾಮುಖ್ಯತೆಯನ್ನು ಅವರು ಒತ್ತಿ ಹೇಳಿದರು.

ಕಸ್ತೂರ್ಬಾ ಆಸ್ಪತ್ರೆಯ ಮುಖ್ಯ ನಿರ್ವಹಣಾಧಿಕಾರಿ ಡಾ. ಆನಂದ ವೇಣುಗೋಪಾಲ್ ಮತ್ತು ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಅವರು ಅಪರೂಪದ ರಕ್ತದ ಗುಂಪನ್ನು ಸಮಯೋಚಿತವಾಗಿ ಪತ್ತೆಹಚ್ಚಿ ಯಶಸ್ವಿಯಾಗಿ ನಿರ್ವಹಿಸಿದುದಕ್ಕೆ ವೈದ್ಯರ ತಂಡವನ್ನು ಶ್ಲಾಘಿಸಿದರು.